## ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಬಾಗೇಪಲ್ಲಿ

ಸಿ.ಸಿ. 485/2023

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಆಂಜಿನಪ್ಪ | ಸಿಡಬ್ಲೂಃ1 |
| ತಂದೆ ಹೆಸರು ಃ | | ಕೃಷ್ಣಪ್ಪ | ಪಿಡಬ್ಲೂಃ 1 |
| ವಯಸ್ಸು | ಃ | 38 ವರ್ಷ | ಪ್ರಮಾಣೀಕರಿಸಲಾದ ದಿನಾಂಕ |
| ವೃತ್ತಿ | ಃ | ವ್ಯಾಪಾರ | 02.07.2026. |
| ವಾಸ ಸ್ಥಳ | ಃ | ಅಬಕವಾರಿಪಲ್ಲಿ ಗ್ರಾಮ | |

**ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ**

ಚಾಸಾ-2 ರಿಂದ 5 ರವರು ಗೊತ್ತು. ಈ ನ್ಯಾಯಾಲಯದ ಮುಂದಿರು ಆರೋಪಿತರು ನನ್ನ ಸಂಬಂಧಿಕರು. ಆರೋಪಿಗಳು ಯಾವತ್ತೂ ನನಗೆ ಕೈಗಳಿಂದ ಅಥವಾ ಕುಡಿಗೊಲಿನಿಂದಾಗಲೀ ಮತ್ತು ರಾಡಿನಿಂದಾಗಾಲೀ ಹೊಡೆದು ಹಲ್ಲೆ ಮಾಡಿರುವುದಿಲ್ಲ. ನನಗೆ ಅವಾಚ್ಯ ಶಬ್ಧಗಳಿಂದ ಬೈದಿರುವುದಿಲ್ಲ ಮತ್ತು ಯಾವುದೇ ಅತಿಕ್ರಮ ಪ್ರವೇಶ ಮಾಡಿರುವುದಿಲ್ಲ.

ಈಗ್ಗೆ ಸುಮಾರು 3 ವರ್ಷಗಳ ಹಿಂದೆ ಆನಾರೋಗ್ಯದ ಕಾರಣ ಆಸ್ಪತ್ರೆಗೆ ಹೋಗಿದ್ದು ಪೋಲೀಸರು ನನ್ನಿಂದ ಕೆಲವೊಂದು ದಾಖಲೆಗಳಿಗೆ ಸಹಿ ಪಡೆದುಕೊಂಡಿರುತ್ತಾರೆ. ಸಾಕ್ಷಿಯು ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು.

ಈಗ್ಗೆ ಸುಮಾರು 3 ವರ್ಷಗಳ ಹಿಂದೆ ನನ್ನ ಸ್ವಂತ ಕೆಲಸದ ಮೇರೆಗೆ ಪೋಲೀಸ್ ಠಾಣೆಗೆ ಹೋಗಿದ್ದಾಗ ಪೋಲೀಸರ ಕೋರಿಕೆಯ ಮೇರೆಗೆ ಒಂದು ಸಹಿ ಹಾಕಿರುತ್ತೇನೆ. ಸಾಕ್ಷಿಯು ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.2 ಎಂದು, ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಹಾಕಿರುತ್ತೇನೆಂದು ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿರುವುದಿಲ್ಲ.

**(ಮಾನ್ಯ ಸ.ಸಅ.ರವರು ಸಾಕ್ಷಿಯನ್ನು ಪ್ರತಿಕೂಲವೆಂದು ಪರಿಗಣಿಸಿದ್ದು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ ರವರಿಂದಃ</u>**

ದಿನಾಂಕ 14.02.2023 ರಂದು ಸಂಜೆ 5.00 ಗಂಟೆ ಸಮಯದಲ್ಲಿ ನನ್ನ ಮನೆಯ ಮುಂದೆ ಮಲಗಿದ್ದಾಗ, ಆರೋಪಿಗಳು ನಮ್ಮ ಮನೆಯ ಒಳಗೆ ಬಂದು ಅವಾಚ್ಯ ಶಬ್ದಗಳಿಂದ ಬೈಯುತ್ತಾ, ಮಧ್ಯಾಹ್ಞ ನಮ್ಮ ಜಮೀನಿನೊಳಗೆ ಬಂದು ಗಲಾಟೆ ಮಾಡುತ್ತೀಯಾ ಎಂದು ಅವಾಚ್ಯ ಶಬ್ದಬಳಿಂದ ಬೈದಿದ್ದರು ಎಂದರೆ ಸರಿಯಲ್ಲ. ನನಗೆ ಆರೊಾಪಿ ಕುಡಿಗೋಲಿನಿಂದ ನನ್ನ ಹಣೆಯ ಭಾಗಕೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿ ನನ್ನ ಎಡ ಕಾಲಿಗೆ ಮತ್ತು ಬೆನ್ನಿನ ಮೇಲೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ.. 3 ನೇ ಅರೋಪಿ ನನ್ನ ಎಡ ಕಾಲಿನ ತೊಡೆಯ ಬಳಿ ಬಲ ಕಾಲಿನ ಮೇಲೆ ಕಚ್ಚಿರುತ್ತಾರೆ ಎಂದರೆ ಸರಿಯಲ್ಲ. ಆಗ ನನ್ನ ಹೆಂಡತಿರವರು ಬಂದು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಂದೆ ಕೃಷ್ಣಪ್ಪರವರು ನನ್ನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಆಸ್ಪತ್ರೆಯಲ್ಲಿ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ 15.07.2023 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದು ನಿಪಿ-2 ರಂತೆ ಮಹಜರ್ ಅನ್ನು ಜರುಗಿಸಿ ಒಂದು ಕುಡಗೋಲು ಮತ್ತು ಒಂದು ಸ್ಟೀಲ್ ರಾಡನ್ನು ಮುಂದಿನ ಕ್ರಮಕ್ಕಾಗಿ ಅಮಾನತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಗ ನ್ಯಾಯಾಲಯದ ಮುಂದೆ ತೋರಿಸುತ್ತಿರುವ ರಾಡು ಮತ್ತು ಕೂಡುಗೋಲಿನಿಂದಲೇ ಆರೋಪಿತರು ನನ್ನ ಮೇಲೆ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ನಾನು  ಮತ್ತು ಆರೋಪಿತರು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ಹಾಗಾಗಿ ಈಗ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

**<u>ಪಾಟೀ ಸವಾಲು ಇಲ್ಲ.</u>**

**<u>ಮರು ವಿಚಾರಣೆ ಇಲ್ಲಃ</u>**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು  ಮಾಡಿಸಲಾಯಿತು.)**

ಓ. ಹೇ. ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಬಾಗೇಪಲ್ಲಿ .